ಗ್ರಾಮದ ನೀರು ಸರಬರಾಜು ಯೋಜನೆಯು ಪ್ರಗತಿಯಲ್ಲಿದ್ದು, ಈ ಯೋಜನೆಯನ್ನು 2002-03ನೇ ಸಾಲಿನಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ನಮ್ಮ ಹೊಲ ನಮ್ಮ ರಸ್ತೆ ಯೋಜನೆ

1758 (2109) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) 2001-02 ನೇ ಸಾಲಿನ ಬಜೆಟ್‌ನಲ್ಲಿ ನಮ್ಮ ಹೊಲ ನಮ್ಮ ರಸ್ತೆ ಎಂಬ ಹೊಸ ಯೋಜನೆಯನ್ನು ಜಾರಿಗೆ ತಂದಿರುವುದು ಸರ್ಕಾರದ ಗಮನದಲ್ಲಿಯೇ

2) ಇದ್ದಲ್ಲಿ ಸದರಿ ಯೋಜನೆಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ;

3) ಬಸವಕಲ್ಯಾಣ ಮತ ಕ್ಷೇತ್ರದಲ್ಲಿ ಈ ಯೋಜನೆಯನ್ನು ಜಾರಿಗೆ ತರಲಾಗಿದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

1) ಇದೆ

2) ಇಲ್ಲ

3) ಇಲ್ಲ

ಬಸವಕಲ್ಯಾಣ ತಾಲ್ಲೂಕಿಗೆ ಮಂಜೂರಾದ ಪ್ರಾಥಮಿಕ ಶಾಲಾ ಶಿಕ್ಷಕರು

1759 (2110) ಶ್ರೀ ಎಂ.ಜಿ. ಮುಳೆ (ಬಸವ ಕಲ್ಯಾಣ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ತಾಲ್ಲೂಕಿಗೆ ಮಂಜೂರಾದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ ಎಷ್ಟು? (ಕನ್ನಡ, ಉರ್ದು, ಮರಾಠಿ ಮಾಧ್ಯಮವಾರು ವಿವರ ನೀಡುವುದು)

ಆ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಭಾಷಾವಾರು ವಿವರ ನೀಡುವುದು)

ಇ) ಬಸವಕಲ್ಯಾಣ ತಾಲ್ಲೂಕಿನಲ್ಲಿ ಸಾಕಷ್ಟು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದುದರಿಂದ ಹಲವು ಶಾಲೆಗಳು ತೆರೆಯಲಾರದ ಪರಿಸ್ಥಿತಿ ಇರುವುದು. ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಖಾಲಿ ಹುದ್ದೆಗಳನ್ನು ಎಂದು ತುಂಬಲಾಗುವುದು?

ಪ್ರೋ।। ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಸವಕಲ್ಯಾಣ ತಾಲ್ಲೂಕಿಗೆ ಮಂಜೂರಾದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ

1.	ಕನ್ನಡ	733
2.	ಉರ್ದು	64
3.	ಮರಾಠಿ	244
4.	ಆಂಗ್ಲ	32
5.	ಹಿಂದಿ	20
6.	ದೈಹಿಕ ಶಿಕ್ಷಕರು	58
7.	ಚಿತ್ರಕಲೆ	02

ಅ) ಖಾಲಿ ಇರುವ ಹುದ್ದೆಗಳ ಸಂಖ್ಯೆ

1.	ಕನ್ನಡ	67
2.	ಉರ್ದು	03
3.	ಮರಾಠಿ	42
4.	ಆಂಗ್ಲ	32
5.	ಹಿಂದಿ	16
6.	ದೈಹಿಕ ಶಿಕ್ಷಕರು	09
7.	ಚಿತ್ರಕಲೆ	02

ಆ) ಹುದ್ದೆಗಳು ಖಾಲಿ ಇದ್ದುದರಿಂದ ಶಾಲೆ ತೆರೆಯಲಾರದ ಪರಿಸ್ಥಿತಿ ಉಂಟಾಗಿಲ್ಲ. ಶಿಕ್ಷಕರ ಕೊರತೆ ಕಾರಣ ಸಮಸ್ಯೆ ಇದ್ದು ಈ ಸಮಸ್ಯೆ ನಿವಾರಿಸಲು ಅಗತ್ಯ ಶಿಕ್ಷಕರನ್ನು ನಿಯೋಜಿಸಿ ಸಮಸ್ಯೆ ಬಗೆಹರಿಸಲಾಗಿದೆ. ನೇರ ನೇಮಕಾತಿ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಯಾರಿಸಲಾದ ಅಂತಿಮ ಪಟ್ಟಿಯ ಮೇಲೆ ಈವರೆಗೆ ಇದ್ದ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ತಡೆಯಾಜ್ಞೆ ತೆರವುಗೊಂಡು ಆದೇಶ ಹೊರಬಂದಿರುವುದರಿಂದ ಆಯ್ಕೆ ಪಟ್ಟಿಯಲ್ಲಿನ ಅರ್ಹ ಅಭ್ಯರ್ಥಿಗಳನ್ನು ತುಂಬುವ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳಲಾಗುವುದು.

ಉರ್ದು ಮತ್ತು ಮರಾಠಿ ಮಾಧ್ಯಮದ ಶಾಲಾ ಪುಸ್ತಕಗಳ ಕೊರತೆ ಬಗ್ಗೆ

1760 (2111) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉರ್ದು ಮತ್ತು ಮರಾಠಿ ಮಾಧ್ಯಮದ ಶಾಲಾ ಪುಸ್ತಕಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಪ್ರಸಕ್ತ ಸಾಲಿನಲ್ಲಿ ಎಷ್ಟು ಪ್ರೌಢ ಶಾಲೆಗಳನ್ನು ಮಂಜೂರು ಮಾಡಲಾಗಿದೆ;

ಈ) ಬಸವಕಲ್ಯಾಣ ಮತ ಕ್ಷೇತ್ರಕ್ಕೆ ಎಷ್ಟು ಪ್ರೌಢ ಶಾಲೆಗಳನ್ನು ಮಂಜೂರು ಮಾಡಲಾಗಿದೆ?

ಪ್ರೋ।। ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಉರ್ದು ಮತ್ತು ಮರಾಠಿ ಮಾಧ್ಯಮದ ಪುಸ್ತಕಗಳ ಕೊರತೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಹಾಗೂ ಕೊರತೆ ಇರುವುದಿಲ್ಲ.

ಆ) ಕೊರತೆ ಇಲ್ಲದಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) 2002-03ನೇ ಸಾಲಿಗೆ ರಾಜ್ಯದಲ್ಲಿ 360 ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆ ಬಂದಿದ್ದು, ಸದರಿ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ಈ) ಪ್ರಸ್ತಾವನೆ ಬಂದಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರ ಬಗ್ಗೆ

1761 (2112) ಶ್ರೀ ಎಂ.ಜಿ. ಮುಳೆ (ಬಸವ ಕಲ್ಯಾಣ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?